**ಓ ಎಸ್ ನಂ: 442/2018**
**ಪಿ.ಡಬ್ಲ್ಯೂ -2**
**ದಿನಾಂಕ: 02.04.2026.**

**ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು: ಪ್ರತಿವಾದಿ ಪರ ಶ್ರೀ ಸಿ ವಿ ಡಿ ವಕೀಲರಿಂದ:**

ನಾನು ಎಸ್ ಎಸ್ ಎಲ್ ಸಿ ವರೆಗೆ ವಿದ್ಯಾಬ್ಯಾಸ ಮಾಡಿರುತ್ತೇನೆ. ನ್ಯಾಯಾಲಯಕ್ಕೆ ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತು. ನಾನು ವಾದಿಯ ಪರವಾಗಿ ಸಾಕ್ಷಿ ಹೇಳಲು ಬಂದಿರುತ್ತೇನೆ. ನಾನು ಪ್ರಮಾಣ ಪತ್ರದಲ್ಲಿ ವಾದಿಯ ಸೈಟ್ ಮತ್ತು ಮನೆಗೆ ಸಂಬಂಧಿಸಿದಂತೆ ಸಲ್ಲಿಸಿರುತ್ತೇನೆ. ಪ್ರಮಾಣ ಪತ್ರವನ್ನು ಸಲ್ಲಿಸುವಾಗ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ವಾದಿಯು ಪ್ರತಿವಾದಿಯರ ಮೇಲೆ ಸಲ್ಲಿಸಿರುವ ದಾವೆ ನ್ಯಾಯಾಲಯದಲ್ಲಿ ವಜಾ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ವಾದಿಯ ತಾಯಿಯಾದ ತಿಮ್ಮಮ್ಮನಿಗೆ ಅವರ ತಂದೆ ತಿಮ್ಮಯ್ಯನವರು ದಾವಾ ಸ್ವತ್ತನ್ನು ನೀಡಿರುತ್ತಾರೆ. ಅದರಕ್ಕೆ ಸಂಬಂಧಿಸಿದಂತೆ ದಾಖಲಾತಿಗಳನ್ನು 8-10 ದಿನದ ಹಿಂದ ನಾನು ನೋಡಿರುತ್ತೇನೆ. ನಾನು ವಾದಿಯಾದ ಈಶ್ವರಪ್ಪನವರ ಮಾತನ್ನು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ರೀತಿಯ ಮಾಹಿತಿ ಇಲ್ಲದೇ ಇದ್ದರೂ ವಾದಿ ಈಶ್ವರಪ್ಪನ ಮಾತನ್ನು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ದಾವಾ ಸ್ವತ್ತಾದ ಸೈಟ್ ನ ಸಂಖ್ಯೆ 16. ಅದರ ಚಕ್ಕುಬಂದಿ ಪೂರ್ವಕ್ಕೆ ಚಂದ್ರಜ್ಜರ ದಾಸಣ್ಣ , ಪಶ್ಚಿಮಕ್ಕೆ ಬೀದಿ , ದಕ್ಷಿಣಕ್ಕೆ ನನ್ನ ಮನೆ , ಉತ್ತರಕ್ಕೆ ಗೋವಿಂದಪ್ಪನ ಮಗ ಕುಮಾರಪ್ಪ. ವಾದಿಯ ತಂದೆ ತಾಯಿಗೆ ಯಾವುದೇ ಸ್ವತ್ತು ಬಂದಿಲ್ಲ ಎಂದರೆ ಸರಿಯಲ್ಲ. ನಂತರ ಅವರ ಮಕ್ಕಳಿಗೆ ಬಂದಿರುತ್ತದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಬಾಯಿ ಮಾತಿನ ಮೂಲಕ

ಪಾಲುವಿಭಾಗವಾಗಿರುತ್ತದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ . ಯಾವುದೇ ಗ್ರಾಮ ಪಂಚಾಯತಿಯಲ್ಲಿ ಬಾಯಿಮಾತಿನ ಮೂಲಕ ಪಾಲುವಿಭಾಗ ಮಾಡಲು ಅಧಿಕಾರ ಇರುವುದಿಲ್ಲ ಎಂದರೆ ಸರಿಯಲ್ಲ. ವಾದಿಯ ಮಾತು ಕೇಳಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತು ಅಸ್ತಿತ್ವದಲ್ಲಿ ಇಲ್ಲ ಎಂದರೆ ಸರಿಯಲ್ಲ. ವಾದಿಯ ದಾವೇ ವಜಾ ಆಗಿದ್ದರೂ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ತಿಮ್ಮಯ್ಯ ಪ್ರತಿವಾದಿಯ ದಾವೆ ನಡೆಯುತ್ತಿರುವ ವಿಚಾರ ನನಗೆ ಗೊತ್ತಿದೆ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತು ಪ್ರತಿವಾದಿಯ ತಂದೆ ಹನುಮಂತಪ್ಪನವರ ಸ್ವತ್ತಾಗಿರುತ್ತದೆ ಎಂದರೆ ಸರಿಯಲ್ಲ. ತಿಮ್ಮಯ್ಯ ಪ್ರತಿವಾದಿಯರ ಸ್ವತ್ತಿನ ಸರ್ವೇ ನಂ.16 ಎಂದರೆ ಅದು ವಾದಿಯ ಸ್ವತ್ತಾಗಿರುತ್ತದೆ. ಈಶ್ವರಪ್ಪನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿ -1 ರವರ ಹೆಸರಿನಲ್ಲಿ ದಾವಾ ಸ್ವತ್ತಿನ ದಾಖಲಾತಿಗಳು ಇರುತ್ತವೆ ಎಂದರೆ ಸಾಕ್ಷಿಯು ಅವು ಸೃಷ್ಟಿಸಿಕೊಂಡ ದಾಖಲಾತಿಗಳಾಗಿರುತ್ತವೆ ಎಂದು ನುಡಿದಿರುತ್ತಾರೆ. ತಿಮ್ಮಯ್ಯನವರಿಗೆ ಕಲ್ಲು ಕಂಬಗಳನ್ನು ಹಾಕಲು ಹೋದಾಗ ವಾದಿ ಈಶ್ವರಪ್ಪ ತೊಂದರೆ ನೀಡಿರುತ್ತಾರೆ ಎಂದರೆ ಸುಳ್ಳು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ

ಅಪರ ಸಿವಿಲ್ ಮತ್ತು ಜೆ ಎಂ ಎಫ್ ಸಿ
ನ್ಯಾಯಾಧೀಶರು, ಹೊಸದುರ್ಗ.